**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

## ಕ್ರಿ ಮೊ ಸಂಖ್ಯೆ 491/2023

ಪಿರ್ಯಾದಿ ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

1) ರಾಜು.ಟಿ.ಕೆ. ಬಿನ್ ಲೇಟ್ ಕೃಷ್ಣಮೂರ್ತಿ, 52 ವರ್ಷ, ವ್ಯವಸಾಯಗಾರರು, ವಾಸ ಃ ಮಗ್ಗದ ಬೀದಿ, ತರೀಕೆರೆ ಟೌನ್.
2) ವಸಂತಕುಮಾರ ಬಿನ್ ಲೇಟ್ ಸಿದ್ದಪ್ಪ, 72 ವರ್ಷ, ವಾಸ ಃ ಗಾಳಿಹಳ್ಳಿ ಕ್ರಾಸ್, ತರೀಕೆರೆ ಟೌನ್.
3) ಭದ್ರಪ್ಪ ಬಿನ್ ಪಾಪಣ್ಣ, 57 ವರ್ಷ, ವ್ಯವಸಾಯಗಾರರು, ವಾಸ ಃ ಬಾವಿಕೆರೆ ಗ್ರಾಮ, ತರೀಕೆರೆ ತಾಲ್ಲೂಕು.
4) ಗಾಳಪ್ಪ ಬಿನ್ ವೆಂಕಟಪ್ಪ, 60 ವರ್ಷ, ವಾಸಃ 4 ನೇ ಕ್ರಾಸ್, ಕೋಡಿಕ್ಯಾಂಪ್, ತರೀಕೆರೆ ಟೌನ್
5) ರಮೇಶ ಬಿನ್ ಕಂದಸ್ವಾಮಿ, 35 ವರ್ಷ, ಚಾಲಕ ವೃತ್ತಿ, ವಾಸಃ ಪ್ರಸಾದ್ ಆಸ್ಪತ್ರೆ ಪಕ್ಕ, ಟಿ.ಎಂ.ರಸ್ತೆ, ಲಕ್ಕವಳ್ಳಿ, ತರೀಕೆರೆ ತಾಲ್ಲೂಕು

### -ಃದೋಷಾರೋಪಣೆಃ-

ಶ್ರೀಮತಿ ಊರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 13.03.2021 ರಂದು ಬೆಳಿಗ್ಗೆ 09.30 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಕೆಂಚಿಕೊಪ್ಪ ಗ್ರಾಮದ ಕುಂದೂರು ರಸ್ತೆಯಲ್ಲಿರುವ ಚಾಸಾ-1 ಪಾಪಣ್ಣರವರು ವಾಸವಿದ್ದ 1 ನೇ ಆರೋಪಿಯಾದ ನಿಮ್ಮ ಮನೆಯ ಬಳಿ ಚಾಸಾ-1 ಮತ್ತು ಚಾಸಾ-7 ಶ್ರೀಮತಿ ತಿಪ್ಪಮ್ಮರವರು ಇರುವಾಗ, ಆರೋಪಿತರಾದ ನೀವು ಏಕೋದ್ದೇಶದಿಂದ ಚಾಸಾ-1 ರವರನ್ನು ಮನೆಯಿಂದ ಬಿಡಿಸಿ ಕಳುಹಿಸುವ ಉದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 143 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು ಚಾಸಾ-1 ರವರನ್ನು ಮನೆಯಿಂದ ಬಿಡಿಸಿ ಕಳುಹಿಸುವ ಉದ್ದೇಶದಿಂದ ಮನೆಯ ಒಳಗಿದ್ದ ಗೃಹೋಪಯೋಗಿ ವಸ್ತುಗಳನ್ನು ರಸ್ತೆಗೆ ತಂದು ಎತ್ತಿ ಹಾಕಿ ಚಾಸಾ-1 ರವರಿಗೆ ಸುಮಾರು ರೂ.50,000/- ನಷ್ಟು ನಷ್ಟವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 427 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಚಾಸಾ-1 ರವರು ವಾಸವಿದ್ದ ಮನೆಯನ್ನು ಕೆಏ13/ಎಂ-4493 ಜೆಸಿಬಿ ಯಂತ್ರದಿಂದ 5 ನೇ ಆರೋಪಿಯಾದ ನೀವು ಬೀಳಿಸಿದ್ದನ್ನು ಕೇಳಿದ್ದಕ್ಕೆ ಚಾಸಾ-1 ರವರಿಗೆ ಬೋಳಿಮಗನೇ ಸೂಳೇಮಗನೆ ಇದು ಯಾರ ಜಾಗ ಎಂದು ಇದ್ದೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 2 ರಿಂದ 4 ನೇ ಆರೋಪಿತರಾದ ನೀವು ಚಾಸಾ-7 ರವರನ್ನು ಅಡ್ಡಗಟ್ಟಿ ಹಿಡಿದುಕೊಂಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 341 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಐದನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 2 ರಿಂದ 4 ನೇ ಆರೋಪಿತರಾದ ನೀವು ಚಾಸಾ-7 ರವರನ್ನು ಅಡ್ಡಗಟ್ಟಿ ಹಿಡಿದುಕೊಂಡು, 1 ನೇ ಆರೋಪಿಯಾದ ನೀವು ಚಾಸಾ-7 ರವರ ಮೈಕೈಗೆ ಹೊಡೆದು, ಅವರನ್ನು ತಳ್ಳಿ ಬೀಳಿಸಿ ಹಾಗೂ ಆರೋಪಿತರಾದ ನೀವು ಚಾಸಾ-1 ರವರಿಗೆ ಸಹ ಕೈಯಿಂದ ಹೊಡೆದು, ಚಾಸಾ-1 ಮತ್ತು 7 ರವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಆರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 2 ರಿಂದ 4 ನೇ ಆರೋಪಿತರಾದ ನೀವು ಚಾಸಾ-7 ರವರನ್ನು ಅಡ್ಡಗಟ್ಟಿ ಹಿಡಿದುಕೊಂಡು, 1 ನೇ ಆರೋಪಿಯಾದ ನೀವು ಚಾಸಾ-7 ರವರ ಮೈಕೈಗೆ ಹೊಡೆದು, ಅವರನ್ನು ತಳ್ಳಿ ಬೀಳಿಸಿ

ಅವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, ಚಾಸಾ-1 ಮತ್ತು 7 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪದ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 23.12.2024

ಸಹಿ

**(ಊರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.